## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಿ.ಎನ್. ಮಂಜೇಗೌಡ, ಇವರು ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ವಿಷಯ:**

ಮೈಸೂರು ನಗರವು ಪಾರಂಪರಿಕ ನಗರ ಎಂಬುದು ರಾಜ್ಯದ ಜನರಿಗೆ ಗೊತ್ತಿರುವ ವಿಷಯ. ಆದರೆ ಇಂದು ಇಂತಹ ಪಾರಂಪರಿಕ ಸೌಂದರ್ಯವೇ ನಶಿಸುವ ಭೀತಿ ಎದುರಾಗಿದೆ. ಮಹಾರಾಜರ ನಾಡು ಮೈಸೂರಿನಲ್ಲಿ 600ಕ್ಕೂ ಹೆಚ್ಚು ಪಾರಂಪರಿಕ ಕಟ್ಟಡಗಳಿವೆ. ಇವುಗಳಲ್ಲಿ ರಕ್ಷಣೆಗೆ ಅಗತ್ಯ ಇರುವ 234 ಕಟ್ಟಡಗಳನ್ನು ಪಾರಂಪರಿಕ ತಜ್ಞರ ಸಮಿತಿ ಸರ್ವೇ ಮೂಲಕ ಗುರುತಿಸಿದೆ. ಇದರಲ್ಲಿ 131 ಕಟ್ಟಡಗಳನ್ನು ಜಿಲ್ಲಾಡಳಿತವೇ ಪಾರಂಪರಿಕ ಪಟ್ಟಿಗೆ ಸೇರಿಸಿದೆ. 150 ವರ್ಷಗಳನ್ನು ಪೂರೈಸಿದ 125 ಕಟ್ಟಗಳಿವೆ. ಇವುಗಳಲ್ಲಿ ಕೆಲವು ಕುಸಿದಿದ್ದು, ಇನ್ನು ಕೆಲವು ಸಂಪೂರ್ಣ ಶಿಥಿಲಾವಸ್ಥೆ ತಲುಪಿದ್ದು, ಯಾವಾಗ ಬೇಕಾದರೂ ಕುಸಿಯುವ ಅಪಾಯ ಎದುರಿಸುತ್ತಿವೆ. ಒಟ್ಟು 25 ಕಟ್ಟಡಗಳು ಅತ್ಯಂತ ಅಪಾಯಕಾರಿ ಸ್ಥಿತಿಯಲ್ಲಿವೆ. ಈ ಎಲ್ಲವೂ ಪ್ರಸಕ್ತ ಮುಂಗಾರು ದಾಟುವುದೇ ಅನುಮಾನ ಎನ್ನುತ್ತಾರೆ ತಜ್ಞರು. ಈ ಹಿನ್ನೆಲೆಯಲ್ಲಿ ಮೈಸೂರಿಗೆ ಪಾರಂಪರಿಕ ನಗರಿ ಪಟ್ಟ ಉಳಿಸಿಕೊಳ್ಳಬೇಕಾದಲ್ಲಿ ಅವುಗಳ ರಕ್ಷಣೆಗೆ ವಿಶೇಷ ಯೋಜನೆ ರೂಪಿಸಬೇಕಿದ್ದು, ಬಜೆಟ್‌ನಲ್ಲಿ ಅನುದಾನ ಪ್ರಕಟಿಸುವ ಅಗತ್ಯವಿದೆ ಲ್ಯಾನ್ಸ್‌ನ್ ಕಟ್ಟಡದ ಭಾಗ 2012ರಲ್ಲಿಯೇ ಕುಸಿದಿದ್ದರೂ ಇಲ್ಲಿಯವರೆಗೆ ಅದರ ರಕ್ಷಣೆಗೆ ಕ್ರಮ ತೆಗೆದುಕೊಳ್ಳಲು ಸಾಧ್ಯವಾಗಿಲ್ಲ. ಇಲಾಖೆ, ಮಹಾನಗರ ಪಾಲಿಕೆಯಲ್ಲಿ ಇವುಗಳಿಗೆ ಯಾವುದೇ ಅನುದಾನ ಇಲ್ಲದೆ ಮೂಕ ಪ್ರೇಕ್ಷಕವಾಗಿರುವ ಬಗ್ಗೆ.

**ಉತ್ತರ:**

ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ದೇವರಾಜ ಮಾರುಕಟ್ಟೆ ಹಾಗೂ ಲ್ಯಾನ್ಸ್‌ನ್ ಕಟ್ಟಡಗಳ ನವೀಕರಣ / ಪುನರ್ ನಿರ್ಮಾಣ ಮಾಡುವ ವಿಷಯವನ್ನು ಜಿಲ್ಲಾಧಿಕಾರಿ, ಮೈಸೂರು ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ವಿಶೇಷ ಪಾರಂಪರಿಕ ಸಂರಕ್ಷಣಾ ಸಮಿತಿ ಮುಂದೆ ದಿನಾಂಕ 13-04-2022 ರಂದು ಮಂಡಿಸಿದ್ದು, "ದೇವರಾಜ ಮಾರುಕಟ್ಟೆ ಮತ್ತು ಲ್ಯಾನ್ಸ್‌ಡೌನ್ ಕಟ್ಟಡವು ಶಿಥಿಲಾವಸ್ಥೆಯಲ್ಲಿರುವುದು ವಿವಿಧ ತಜ್ಞರ ಸಮಿತಿಯ ವರದಿಯಲ್ಲಿ ತಿಳಿಸಿರುವುದರಿಂದ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ದೇವರಾಜ ಮಾರುಕಟ್ಟೆ ಮತ್ತು ಲಾನ್ಸ್‌ಡೌನ್ ಕಟ್ಟಡಗಳನ್ನು ನೆಲಸಮಗೊಳಿಸಿ ಪಾರಂಪರಿಕ ವಸ್ತು ಸಾಮಗ್ರಿಗಳನ್ನು ಉಪಯೋಗಿಸಿಕೊಂಡು ಅದೇ ವಾಸ್ತು ಶೈಲಿಯಲ್ಲಿಯೇ ಪುನರ್ ನಿರ್ಮಾಣ ಮಾಡುವುದು ಸೂಕ್ತ ಎಂದು ನಿರ್ಣಯಿಸಲಾಗಿರುತ್ತದೆ.

ಈ ಕ್ರಮವನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ 15215/2020 ರಲ್ಲಿ ವಿಷಯದ ಬಗೆಗಿನ ಮಾಹಿತಿಯನ್ನು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ವಿಶೇಷ ಪಾರಂಪರಿಕ ಸಂರಕ್ಷಣಾ ಸಮಿತಿಯ ನಿರ್ಣಯದ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದು, ದಿನಾಂಕ 08-08-2023ರಂದು ಮಾನ್ಯ ಉಚ್ಚ ನ್ಯಾಯಾಲಯವು ಪ್ರಕರಣವನ್ನು ವಜಾಗೊಳಿಸಿರುತ್ತದೆ. ಅದರಂತೆ, ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ದೇವರಾಜ ಮಾರುಕಟ್ಟೆ ಮತ್ತು ಲ್ಯಾನ್ಸ್‌ಡೌನ್ ಕಟ್ಟಡವನ್ನು ನೆಲಸಮಗೊಳಿಸಿ ಪಾರಂಪರಿಕ ವಸ್ತು ಸಾಮಗ್ರಿಗಳನ್ನು ಉಪಯೋಗಿಸಿಕೊಂಡು ಅದೇ ವಾಸ್ತು ಶೈಲಿಯಲ್ಲಿಯೇ ಪುನರ್‌ನಿರ್ಮಿಸಲು ಅನುಮತಿ ಹಾಗೂ ಅನುದಾನ ಕೋರಿ ಪಾಲಿಕೆವತಿಯಿಂದ ಪೌರಾಡಳಿತ ನಿರ್ದೇಶನಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ.

**ನಅಇ 155 ಎಸಿಎಂ 2023 (ಇ)**

14/12/2023

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು